# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿದಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿಯ ಸಭೆಯನ್ನು ದಿನಾಂಕ: 21-01-2022 ರಂದು ಆಯೋಜಿಸಿದ್ದು, ಸದರಿ ವಾರ್ಡ್ ಸಮಿತಿ ಸಭೆಯ ನಡವಳಿಗಳು**

1. ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)
2. ಶ್ರೀ ಎಸ್. ರಾಜನ್ (ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು)
3. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು,
4. ಶ್ರೀ ನಂಜುಂಡಯ್ಯ, ಸಹಾಯಕ ಅಭಿಯಂತರರು, ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
5. ಶ್ರೀಮತಿ ಶ್ರೀಲಕ್ಷ್ಮಿ, ಕಿರಿಯ ಆರೋಗ್ಯ ನಿರೀಕ್ಷಕರು,
6. ಶ್ರೀ ಶ್ರೀನಿವಾಸ್, ಕಂದಾಯ ನಿರೀಕ್ಷಕರು,
7. ಶ್ರೀ ಜೋಶ್ವಾ, ಕರ ವಸೂಲಿಗಾರರು,
8. ಶ್ರೀ ರವಿಚಂದ್ರನ್, ಸ್ಥಳೀಯರು,
9. ಶ್ರೀ ಮುರುಳಿಧರ್, ಸ್ಥಳೀಯರು,
10. ಶ್ರೀ ಡಿ ರಾಜ, ಸ್ಥಳೀಯರು,
11. ಶ್ರೀ ಮೈಕಲ್, ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಡಿ ರಾಜ, ಸ್ಥಳೀಯರು ಮಾತನಾಡುತ್ತಾ,**

- ಕಾಳಮ್ಮ ರಸ್ತೆಯಲ್ಲಿರುವ ಬೋರ್‌ವೆಲ್ ದುರಸ್ತಿಯಾಗಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕೂಡಲೇ ಇದನ್ನು ಬಿಡಬ್ಲ್ಯೂಎಸ್‌ಎಸ್‌ಬಿ ವತಿಯಿಂದ ದುರಸ್ತಿಪಡಿಸಲು ಸಭೆಗೆ ತಿಳಿಸಿದರು.
- ಸಂಪಿಗೆ ರಸ್ತೆಯಲ್ಲಿ ಚರಂಡಿಯಲ್ಲಿ ಹೂಳು ತುಂಬಿದ್ದು, ಕೂಡಲೇ ತೆರವುಗೊಳಿಸಲು ಸಭೆಗೆ ತಿಳಿಸಿದರು.
- ಇಂದಿರಾ ಸ್ಟ್ರೀಟ್ ರಸ್ತೆ ಹಾಳಾಗಿದ್ದು, ಕೂಡಲೇ ಡಾಂಬರೀಕರಣ ಮಾಡಲು ಸಭೆಗೆ ತಿಳಿಸಿದರು.

2) **ಶ್ರೀ ಮುರುಳಿಧರ್, ಸ್ಥಳೀಯರು ಮಾತನಾಡುತ್ತಾ,**

- ಐ.ಓ.ಸಿ ಫ್ಲೈ ಓವರ್ ಕೆಳಗೆ ಪೊಲೀಸ್ ಚೌಕಿ ಸುತ್ತಮುತ್ತ ಕಸ ಮತ್ತು ಗಿಡಗಳು ಬೆಳೆದಿದ್ದು, ಆರೋಗ್ಯ ಇಲಾಖೆಯವರು ಇದನ್ನು ತೆರವುಗೊಳಿಸಲು ಸಭೆಗೆ ತಿಳಿಸಿದರು.
- ಆರ್.ಎಸ್.ಆಟದ ಮೈದಾನವನ್ನು ಅಭಿವೃದ್ಧಿ ಪಡಿಸಲು ಸಭೆಗೆ ತಿಳಿಸಿದರು.
- ಆರ್.ಎಸ್.ಆಟದ ಮೈದಾನಕ್ಕೆ ಸೆಕ್ಯೂರಿಟಿ ಗಾರ್ಡ್‌ಅನ್ನು ನಿಯೋಜಿಸಲು ಸಭೆಗೆ ತಿಳಿಸಿದರು.

3) **ಶ್ರೀ ಮೈಕಲ್, ಸ್ಥಳೀಯರು, ಮಾತನಾಡುತ್ತಾ,**

- ಜಾನಕಿರಾಮ್ ಬಡಾವಣೆಯಲ್ಲಿ ಕಡುಬಡವರು ವಾಸವಿದ್ದು, ಅವರಿಗೆ ಪಾಲಿಕೆ ವತಿಯಿಂದ ಒಂಟಿ ಮನೆ ನಿರ್ಮಾಣ ಮಾಡಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.
- ಕೆ.ಹೆಚ್.ಬಿ ಕಾಲೋನಿಯಲ್ಲಿ ವಸತಿ ಗೃಹಗಳಲ್ಲಿ ಸ್ಯಾನಿಟರಿ ಪೈಪ್‌ಲೈನ್, ಸೀಲಿಂಗ್ ಛಾವಣಿ ದುರಸ್ಥಿ ಹಾಗೂ ಕುಡಿಯುವ ನೀರಿನ ಸಮಸ್ಯೆ ಇದ್ದು, ಇದನ್ನು ಕೆ.ಹೆಚ್.ಬಿ ಇಲಾಖೆಯ ವತಿಯಿಂದ ಸರಿಪಡಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

4) **ಶ್ರೀ ರವಿಚಂದ್ರನ್, ಸ್ಥಳೀಯರು, ಮಾತನಾಡುತ್ತಾ,**

- ವಾರ್ಡ್ ವ್ಯಾಪ್ತಿಯಲ್ಲಿ ಕೊಳಚ ಪ್ರದೇಶಗಳು ಹೆಚ್ಚಾಗಿದ್ದು, ಡ್ರೈನ್ ಸ್ವಚ್ಛಗೊಳಿಸಲು ಟ್ರಾಕ್ಟರ್ ಅಂಡ್ ಲೇಬರ್ ಇಲ್ಲದೇ ಇರುವುದರಿಂದ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಟೆಂಡರ್ ಕರೆಯಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.
- ಕಾಳಮ್ಮ ರಸ್ತೆಗೆ ಕಾಂಕ್ರೀಟ್ ಚರಂಡಿಯನ್ನು ಅಭಿವೃದ್ಧಿಪಡಿಸಲು ಸಭೆಗೆ ತಿಳಿಸಿದರು.

ನೋಡೆಲ್ ಅಧಿಕಾರಿಯವರು ಮಾತನಾಡಿ, ಕಾಳಮ್ಮ ರಸ್ತೆಗೆ ಕಾಂಕ್ರೀಟ್ ಚರಂಡಿಯನ್ನು ಪಾಲಿಕೆಯ ಮುಂದಿನ ಅನುದಾನದಲ್ಲಿ ಕಾಮಗಾರಿಯನ್ನು ತೆಗೆದುಕೊಳ್ಳಲು ತಿಳಿಸಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಿದರು.

**ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ,**

**ನೋಡೆಲ್ ಅಧಿಕಾರಿ**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ**

**ಪ್ರತಿಯನ್ನು**

1) ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
2) ಕಾರ್ಯಪಾಲಕ ಅಭಿಯಂತರರು, ಯೋಜನೆ (ಪೂರ್ವ ವಲಯ) ಬಿ.ಬಿ.ಎಂ.ಪಿ
3) ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ ವಲಯ) ಬಿ.ಬಿ.ಎಂ.ಪಿ
4) ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5) ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ
6) ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು.ಬಿ.ಬಿ.ಎಂ.ಪಿ
7) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
8) ತೋಟಗಾರಿಕಾ ಅಧೀಕ್ಷಕರು, (ಪೂರ್ವ ವಲಯ)
9) ಆರೋಗ್ಯ ವೈದ್ಯಾಧಿಕಾರಿಗಳು, (ಪೂರ್ವ ವಲಯ)
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ
11) ಸಹಾಕಯ ಕಂದಾಯ ಅಧಿಕಾರಿ, ಮಾರುತಿ ಸೇವಾ ನಗರ ಉಪವಿಭಾಗ
12) ಕಲ್ಯಾಣಾದಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
13) ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
14) ಪೋಲಿಸ್ ಇನ್ಸ್‌ಪೆಕ್ಟರ್, ಬಾಣಸವಾಡಿ.
15) ಪೋಲಿಸ್ ಇನ್ಸ್‌ಪೆಕ್ಟರ್,(ಸಂಚಾರಿ), ಬಾಣಸವಾಡಿ.
16) ಕಛೇರಿ ಪ್ರತಿ.